ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ಹೊಸ ಸಾರ್ವಜನಿಕ ಕಛೇರಿಗಳು,**
**ನೃಪತುಂಗ ರಸ್ತೆ, ಬೆಂಗಳೂರು**

ಸಂಖ್ಯೆ : ಸಿ5(2)ಪ.ಸ.ಮುಂಬಡ್ತಿ-79/2020-21 ದಿನಾಂಕ :26-07-2021

**ಜ್ಞಾಪನಾ**

ವಿಷಯ:ಸಾರ್ವಜನಿಕ ಶಿಕ್ಷಣ ಇಲಾಖೆಯ ಪತ್ರಾಂಕಿತ ವ್ಯವಸ್ಥಾಪಕರು / ಸಹಾಯಕ ನಿರ್ದೇಶಕರು (ಬೋಧಕೇತರ) ಹುದ್ದೆಯಿಂದ ಪತ್ರಾಂಕಿತ ಸಹಾಯಕರ ಪದೋನ್ನತಿ ನೀಡುತ್ತಿರುವುದರಿಂದ ಪತ್ರಾಂಕಿತ ಸಹಾಯಕರ ಹುದ್ದೆಗಳಲ್ಲಿ ಎದುರಾಗಿ ಕಾರ್ಯ ನಿರ್ವಹಿಸುತ್ತಿರುವ ಪತ್ರಾಂಕಿತ ವ್ಯವಸ್ಥಾಪಕರುಗಳನ್ನು ಸ್ಥಳ ನಿಯುಕ್ತಿಗೊಳಿಸುವ ಬಗ್ಗೆ.

ಉಲ್ಲೇಖ:ಸರ್ಕಾರದ ಆದೇಶ ಸಂಖ್ಯೆ: ಇಪಿ 90 ಡಿಎಆರ್.2020 ದಿ24-02-2021

2.ಈ ಕಛೇರಿಯ ಜ್ಞಾಪನಾ ಸಂಖ್ಯೆ: ಸಿ[2]ಹುಮಂ/07/2005-06 ದಿನಾಂಕ:15-03-2021.

3.ದಿನಾಂಕ:26-07-2021 ರಂದು ನಡೆದ ಇಲಾಖಾ ಮುಂಬಡ್ತಿ ಸಮಿತಿಯ ಸಭಾ ನಡವಳಿಗಳು.

-000-

ಬೆಂಗಳೂರು ಮತ್ತು ಮೈಸೂರು ವಿಭಾಗದ ವ್ಯಾಪ್ತಿಯ 06 ಉಪ ನಿರ್ದೇಶಕರ ಕಛೇರಿಗಳಲ್ಲಿ ಪತ್ರಾಂಕಿತ ವ್ಯವಸ್ಥಾಪಕರ ಹುದ್ದೆಗಳಿದ್ದು ಉಲ್ಲೇಖಿತ ಸರ್ಕಾರದ ಪತ್ರದ ಆದೇಶದಲ್ಲಿ ಪತ್ರಾಂಕಿತ ವ್ಯವಸ್ಥಾಪಕರ ಹುದ್ದೆಗಳನ್ನು ಪತ್ರಾಂಕಿತ ಸಹಾಯಕರ ಹುದ್ದೆಗಳನ್ನಾಗಿ ಉನ್ನತೀಕರಿಸಲಾಗಿದೆ. ಉಲ್ಲೇಖ [2] ರಲ್ಲಿ ಬೆಂಗಳೂರು ಆಯುಕ್ತಾಲಯ ವ್ಯಾಪ್ತಿಯಲ್ಲಿನ ಉನ್ನತೀಕರಿಸಿದ ಹುದ್ದೆಗಳಲ್ಲಿ ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವ ಪತ್ರಾಂಕಿತ ವ್ಯವಸ್ಥಾಪಕರುಗಳು ಬಡ್ತಿ ಪ್ರಕ್ರಿಯೆ ಪೂರ್ಣಗೊಳ್ಳುವವರೆವಿಗೆ, ಪತ್ರಾಂಕಿತ ಸಹಾಯಕರ ಹುದ್ದೆಗೆ ಎದುರಾಗಿ ಸ್ವಂತ ವೇತನ ಶ್ರೇಣಿಯಲ್ಲಿ ಮುಂದುವರೆಸಲಾಗಿದೆ. ಉಲ್ಲೇಖ [3] ರ ಕಛೇರಿ ನಡಾವಳಿಯಲ್ಲಿ ಈ ಹುದ್ದೆಗಳಿಗೆ ಪತ್ರಾಂಕಿತ ವ್ಯವಸ್ಥಾಪಕರ ಹುದ್ದೆಯಿಂದ ಪತ್ರಾಂಕಿತ ಸಹಾಯಕರ ಹುದ್ದೆಗೆ ಮುಂಬಡ್ತಿ ನೀಡಲು ತೀರ್ಮಾನಿಸಿದೆ.

ಈ ಹಿನ್ನೆಲೆಯಲ್ಲಿ ಸದರಿ ಹುದ್ದೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಈ ಕೆಳಕಂಡ ಪತ್ರಾಂಕಿತ ವ್ಯವಸ್ಥಾಪಕರುಗಳನ್ನು ಖಾಲಿ ಹುದ್ದೆಗಳಿಗೆ ಸ್ಥಳಾಂತರಿಸುವ ಸಲುವಾಗಿ ದಿನಾಂಕ: 06-08-2021 ರಂದು ಮದ್ಯಾಹ್ನ 12-00 ಗಂಟೆಗೆ ಕೌನ್ಸಿಲಿಂಗ್‌ನ್ನು ಮಾನ್ಯ ಆಯುಕ್ತರ ಕಛೇರಿ ಸಭಾಂಗಣ, ಬೆಂಗಳೂರು ಇಲ್ಲಿ ನಡೆಸಲಾಗುವುದು. ಅಂದು ಕೆಳಕಂಡ ಅಧಿಕಾರಿಗಳು ಸ್ಥಳ ನಿಯುಕ್ತಿ ಕೌನ್ಸಿಲಿಂಗ್‌ನಲ್ಲಿ ಹಾಜರಾಗಿ ಸ್ಥಳ ಆಯ್ಕೆ ಮಾಡಿಕೊಳ್ಳಲು ಸೂಚಿಸಿದೆ. ಒಂದು ವೇಳೆ ಗೈರು ಹಾಜರಾದಲ್ಲಿ ಡಮ್ಮಿ ಕೌನ್ಸಿಲಿಂಗ್ ಮುಖಾಂತರ ಸ್ಥಳ ನಿಯುಕ್ತಿಗೊಳಿಸಲಾಗುವುದು.

| ಕ್ರ.ಸಂ | **ಸ್ಥಳಾಂತರಿಸಿರುವ ಅಧಿಕಾರಿಗಳ ಹೆಸರು ಮತ್ತು ವಿಳಾಸ** |
|---|---|
| 01 | ಶ್ರೀ.ಕೆ.ಎಂ.ಸತ್ಯರಾಯಣ ಗೌಡ, ಪತ್ರಾಂಕಿತ ವ್ಯವಸ್ಥಾಪಕರು, ಉಪ ನಿರ್ದೇಶಕರ ಕಛೇರಿ, ಚಿಕ್ಕಬಳ್ಳಾಪುರ |
| 02 | ಶ್ರೀ.ರಾಮಪ್ರಸನ್ನ, ಪತ್ರಾಂಕಿತ ವ್ಯವಸ್ಥಾಪಕರು, ಉಪ ನಿರ್ದೇಶಕರ ಕಛೇರಿ, ರಾಮನಗರ ಜಿಲ್ಲೆ. |
| 03 | ಶ್ರೀ.ಎಸ್.ಜಯಪ್ರಕಾಶ್ ಹೆಗ್ಡೆ, ಪತ್ರಾಂಕಿತ ವ್ಯವಸ್ಥಾಪಕರು, ಉಪ ನಿರ್ದೇಶಕರ ಕಛೇರಿ, ಉಡುಪಿ ಜಿಲ್ಲೆ. |

**[ಮಾನ್ಯ ಆಯುಕ್ತರ ಆದೇಶದ ಮೇರೆಗೆ]**

ಡಾ. ಎಸ್ ರೂಪಶ್ರೀ, ಕೆ.ಎ.ಎಸ್
ಜಂಟಿ ನಿರ್ದೇಶಕರು[ಆಡಳಿತ]

ಗೆ, 1. ಉಪ ನಿರ್ದೇಶಕರು, ಸಾ.ಶಿ. ಇಲಾಖೆ, ಚಿಕ್ಕಬಳ್ಳಾಪುರ, ರಾಮನಗರ ಮತ್ತು ಉಡುಪಿ ಜಿಲ್ಲೆ. ರವರಿಗೆ ಕಳುಹಿಸುತ್ತಾ ಸಂಬಂದಿಸಿದ ಅಧಿಕಾರಿಗಳನ್ನು ಕೌನ್ಸಿಲಿಂಗ್‌ಗೆ ಹಾಜರಾಗಲು ಸೂಚನೆ ನೀಡುವುದು.

2. ಸಂಬಂದಿಸಿದ ಅಧಿಕಾರಿಗಳಿಗೆ, 3. ಕಛೇರಿ ಪ್ರತಿ.

ಕರ್ನಾಟಕ ಸರ್ಕಾರ

ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು

**ಸಂಖ್ಯೆ : ಸಿ5(2) ಪಸ.ಮುಂಬಡ್ತಿ:79/2020-21** ದಿನಾಂಕ: 26-07-2021

## ::ಅಧಿಸೂಚನೆ ::

ವಿಷಯ :- ಸಾರ್ವಜನಿಕ ಶಿಕ್ಷಣ ಇಲಾಖೆಯ ಪತ್ರಾಂಕಿತ ವ್ಯವಸ್ಥಾಪಕರು / ಸಹಾಯಕ ನಿರ್ದೇಶಕರು (ಬೋಧಕೇತರ) ಹುದ್ದೆಯಿಂದ ಪತ್ರಾಂಕಿತ ಸಹಾಯಕರ ಹುದ್ದೆಗೆ ಪದೋನ್ನತಿ ನೀಡುವ ಕುರಿತು.

ಉಲ್ಲೇಖ :- ಸರ್ಕಾರದ ಆದೇಶ ಸಂಖ್ಯೆ : ಡಿಪಿಎಆರ್ 12 ಎಸ್‌ಡಿಇ 2005 ದ: 29-01-2008.

2 :- ಸರ್ಕಾರದ ಆದೇಶ ಸಂಖ್ಯೆ : ಇಡಿ 464 ಡಿಪಿಐ 2008 ದಿ : 06-01-2009.

3 :- ದಿನಾಂಕ : 26-07-2021 ರಂದು ನಡೆದ ಇಲಾಖಾ ಮುಂಬಡ್ತಿ ಸಮಿತಿಯ ಸಭಾ ನಡವಳಿಗಳು.

* * * * * *

ಸಾರ್ವಜನಿಕ ಶಿಕ್ಷಣ ಇಲಾಖೆಯ ಬೆಂಗಳೂರು ಆಯುಕ್ತಾಲಯದ ಆಡಳಿತ ವ್ಯಾಪ್ತಿಯಲ್ಲಿ ಬರುವ ಗ್ರೂಪ್ 'ಬಿ' ವೃಂದದ ಪತ್ರಾಂಕಿತ ಸಹಾಯಕರ ವೃಂದಕ್ಕೆ ಉಲ್ಲೇಖಿತ (1) ರ ಸರ್ಕಾರದ ಆದೇಶದಲ್ಲಿ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ರವರನ್ನು ನೇಮಕಾತಿ ಪ್ರಾಧಿಕಾರಿಯನ್ನಾಗಿ ನೇಮಿಸಿ ಆದೇಶಿಸಲಾಗಿದೆ.

ಗ್ರೂಪ್ 'ಬಿ' ವೃಂದದ ಹುದ್ದೆಗಳಿಗೆ ಬಡ್ತಿಯನ್ನು ನೀಡುವ ಸಲುವಾಗಿ ಆಯುಕ್ತಾಲಯವಾರು ಇಲಾಖಾ ಮುಂಬಡ್ತಿ ಸಮಿತಿಯನ್ನು ಉಲ್ಲೇಖಿತ (2) ರ ಸರ್ಕಾರದ ಆದೇಶದಲ್ಲಿ ರಚಿಸಿ ಆದೇಶಿಸಲಾಗಿದೆ. ಅದರಂತೆ ಬೆಂಗಳೂರು ಆಯುಕ್ತಾಲಯದ ಆಡಳಿತ ವ್ಯಾಪ್ತಿಯಲ್ಲಿ ಬರುವ ಪತ್ರಾಂಕಿತ ಸಹಾಯಕರ ಹುದ್ದೆಗಳಲ್ಲಿ ಪ್ರಸ್ತುತ ಖಾಲಿ ಇರುವ ಹುದ್ದೆಗಳಿಗೆ ಪತ್ರಾಂಕಿತ ವ್ಯವಸ್ಥಾಪಕರು/ಸಹಾಯಕ ನಿರ್ದೇಶಕರು (ಬೋಧಕೇತರ) ಹುದ್ದೆಯಿಂದ ಪತ್ರಾಂಕಿತ ಸಹಾಯಕರ ಹುದ್ದೆಗಳಿಗೆ ವೃಂದ ಮತ್ತು ನೇಮಕಾತಿ ನಿಯಮಾವಳಿಗಳಂತೆ ಸ್ಥಾನಪನ್ನ ಬಡ್ತಿಯನ್ನು ನೀಡುವ ಸಲುವಾಗಿ ದಿನಾಂಕ : 26-07-2021 ರಂದು ನಡೆದ ಇಲಾಖಾ ಮುಂಬಡ್ತಿ ಸಭೆಯಲ್ಲಿ ಅರ್ಹ ಪತ್ರಾಂಕಿತ ವ್ಯವಸ್ಥಾಪಕರು/ಸಹಾಯಕ ನಿರ್ದೇಶಕರುಗಳಿಗೆ ಪತ್ರಾಂಕಿತ ಸಹಾಯಕರಾಗಿ ಮುಂಬಡ್ತಿ ನೀಡಲು ತೀರ್ಮಾನಿಸಲಾಯಿತು.

ಸಾರ್ವಜನಿಕ ಶಿಕ್ಷಣ ಇಲಾಖೆಯ ಗ್ರೂಪ್ "ಬಿ" ವೃಂದದ ವೇತನ ಶ್ರೇಣಿ ರೂ. 40900-78200 ರಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಈ ಕೆಳಕಂಡ ಪತ್ರಾಂಕಿತ ವ್ಯವಸ್ಥಾಕರು/ಸಹಾಯಕ ನಿರ್ದೇಶಕರು(ಬೋಧಕೇತರ) ಇವರುಗಳಿಗೆ ಪತ್ರಾಂಕಿತ ಸಹಾಯಕ ಹುದ್ದೆಗಳಿಗೆ ವೇತನ ಶ್ರೇಣಿ ರೂ. 43100-83900 ರಂತೆ ಸ್ಥಾನಪನ್ನ ಬಡ್ತಿಯನ್ನು ನೀಡಿ ಆದೇಶಿಸಲಾಗಿದೆ. ಈ ಅಧಿಕಾರಿಗಳಿಗೆ ಸ್ಥಳ ನಿಯುಕ್ತಿ ಆದೇಶವನ್ನು ಹೊರಡಿಸಿದ ನಂತರ ಅವರು ಬಡ್ತಿ ಹುದ್ದೆಯಲ್ಲಿ ಕರ್ತವ್ಯಕ್ಕೆ ಹಾಜರಾದ ದಿನಾಂಕದಿಂದ ಆರ್ಥಿಕ ಸೌಲಭ್ಯಕ್ಕೆ ಅರ್ಹರಾಗುತ್ತಾರೆ. ಈ ಕೆಳಕಂಡ ಅಧಿಕಾರಿಗಳಿಗೆ ದಿನಾಂಕ:06-08-2021 ರಂದು ಆಯುಕ್ತರ ಕಛೇರಿ ಸಭಾಂಗಣ, ಬೆಂಗಳೂರು ಇಲ್ಲಿ ಅವರುಗಳ ಜೇಷ್ಠತೆ ಅನುಸಾರ ಹಾಗೂ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 18 ಸೇನೌವ 2014 ದಿನಾಂಕ: 06-02-2021 ರ ಅದೇಶದಂತೆ ಅಂಗವಿಕಲ ನೌಕರರಿಗೆ ಆಧ್ಯತೆ ನೀಡಿ ಕೌನ್ಸಿಲಿಂಗ್ ಮುಖೇನ ಸ್ಥಳವನ್ನು ಆಯ್ಕೆಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗುವುದು.

ಕರ್ನಾಟಕ ಸಿವಿಲ್ ಸೇವಾ [ಸಾಮಾನ್ಯ ನೌಕರಿ ಭರ್ತಿ] ನಿಯಮಗಳು-1977ರ ನಿಯಮ 4ಎ ರಂತೆ ಬಡ್ತಿ ನೀಡಲಾದ ಈ ಕೆಳಕಂಡ ನೌಕರರು ಅಂಥ ಬಡ್ತಿಯನ್ನು ಹೊಂದಲು ಇಚ್ಚಿಸದಿದ್ದರೆ ,ದಿನಾಂಕ: 05-08-2021 ರ ಒಳಗೆ ನೀಡಲಾದ ಬಡ್ತಿಯನ್ನು ಬಿಟ್ಟುಕೊಡಲು ನೇಮಕ ಪ್ರಾಧಿಕಾರ ಅನುಮತಿಯನ್ನು ಕೋರಿ ಲಿಖಿತ ಕೋರಿಕೆ ಸಲ್ಲಿಸುವುದು. ದಿನಾಂಕ: 05-08-2021 ರ ನಂತರ ಯಾವುದೇ ಕೋರಿಕೆಯನ್ನು ಪರಿಗಣಿಸುವುದಿಲ್ಲ.

| ಕ್ರಮ ಸಂಖ್ಯೆ | ಜೇಷ್ಠತಾ ಸಂಖ್ಯೆ | ಅಧೀಕ್ಷಕರ ಹೆಸರು<br>ಶ್ರೀ / ಶ್ರೀಮತಿ |
|---|---|---|
| 01 | 210 | ಬಿ.ಕೃಷ್ಣಮೂರ್ತಿ ನಾಯ್ಕ, ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಕುಂದಾಪುರ, ಉಡುಪಿ ಜಿಲ್ಲೆ. |
| 02 | 211 | ಸೀತಾಲಕ್ಷ್ಮಿ, ಸಹಾಯಕ ನಿರ್ದೇಶಕರು, ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು. |
| 03 | 274 | ಕೆ.ಜಿ.ಜಯಕಾಂತ ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಮಡಿಕೇರಿ, ಕೊಡಗು ಜಿಲ್ಲೆ. |
| 04 | 216 | ಸ್ವರ್ಣಲತ, ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಸುಳ್ಯ ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ. |
| 05 | 217 | ಮುಷೀರ್ ಅಹಮದ್.ಎಂ, ಸಹಾಯಕ ನಿರ್ದೇಶಕರು, ಮದ್ಯಾಹ್ನ ಉಪಹಾರ ಯೋಜನೆ ಬೆಂಗಳೂರು. |
| 06 | 224 | ಎಂ.ಎಲ್. ಶ್ರೀನಿವಾಸ ಮೂರ್ತಿ, ಸಹಾಯಕ ನಿರ್ದೇಶಕರು, ಶಿಕ್ಷಕರ ಕಲ್ಯಾಣ ನಿಧಿ, ಬೆಂಗಳೂರು. |

| | | |
|---|---|---|
| 07 | 225 | ಎಂಆರ್.ಗೋಪಾಲಕೃಷ್ಣ, ಪತ್ರಾಂಕಿತ ವ್ಯವಸ್ಥಾಪಕರು,<br>ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಉತ್ತರ ವಲಯ-3, ಬೆಂಗಳೂರು ಉತ್ತರ ಜಿಲ್ಲೆ |
| 08 | 226 | ಸಿರ್ವಿನ್ ನಿರ್ಮಲ ಸೋನ್ಸ್ ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಬಂಟ್ವಾಳ ದಕ್ಷಿಣ ಕನ್ನಡ ಜಿಲ್ಲೆ |
| 09 | 227 | ಕೆ.ಎಂ. ವಿನಯ್ ಕುಮಾರ್, ಸಹಾಯಕ ನಿರ್ದೇಶಕರು, ರಾಜ್ಯ ಶಿಕ್ಷಣ ಸಂಶೋದನೆ ಮತ್ತು ತರಬೇತಿ ಇಲಾಖೆ, 100 ಅಡಿ ವರ್ತುಲ ರಸ್ತೆ, ಬನಶಂಕರಿ, ಬೆಂಗಳೂರು. |

ಸ್ಥಾನಪನ್ನ ಬಡ್ತಿ ಹೊಂದಿದ ಅಧಿಕಾರಿಗಳು ದಿನಾಂಕ: 06-08-2021 ರಂದು ಬೆಳಿಗ್ಗೆ 11-00 ಗಂಟೆಗೆ ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು ಇಲ್ಲಿ ಸ್ಥಳ ನಿಯುಕ್ತಿಗೆ ಕೌನ್ಸಿಲಿಂಗ್ ನಡೆಸಲಾಗುವುದು. ಬಡ್ತಿ ಹೊಂದಿದ ಅಧಿಕಾರಿಗಳು ನಿಗಧಿತ ದಿನಾಂಕದಂದು ಕೌನ್ಸಿಲಿಂಗ್‌ಗೆ ಹಾಜರಾಗಿ ಸ್ಥಳ ಆಯ್ಕೆ ಮಾಡಿಕೊಳ್ಳಲು ಸೂಚಿಸಿದೆ.

[ವಿ.ಅನ್ಬುಕುಮಾರ್]
ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ
26/7/21

ಇವರಿಗೆ:

1) ಸರ್ಕಾರದ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2) ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು ಇವರಿಗೆ ಮುಂದಿನ ಕ್ರಮಕ್ಕಾಗಿ.
3) ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಅಭಿಯಾನ, ನೃಪತುಂಗ ರಸ್ತೆ, ಬೆಂಗಳೂರು.
4) ಸಂಬಂಧಿಸಿದ ಜಿಲ್ಲಾ ಪಂಚಾಯತಿ ಕಾರ್ಯನಿರ್ವಹಣಾಧಿಕಾರಿಗಳಿಗೆ.
5) ನಿರ್ದೇಶಕರು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
6) ನಿರ್ದೇಶಕರು, ರಾಜ್ಯ ಶಿಕ್ಷಣ ಮತ್ತು ಸಂಶೋಧನೆ ತರಬೇತಿ ಇಲಾಖೆ, 100 ಅಡಿ ವರ್ತುಲ ರಸ್ತೆ, ಹೊಸಕೆರೆಹಳ್ಳಿ, ಬನಶಂಕರಿ, ಬೆಂಗಳೂರು.
7) ನಿರ್ದೇಶಕರು, ಕರ್ನಾಟಕ ಪಠ್ಯ ಪುಸ್ತಕ ಸಂಘ [ರಿ] 100 ಅಡಿ ವರ್ತುಲ ರಸ್ತೆ, ಹೊಸಕೆರೆಹಳ್ಳಿ, ಬನಶಂಕರಿ, ಬೆಂಗಳೂರು.
8) ನಿರ್ದೇಶಕರು [ಪರೀಕ್ಷೆಗಳು] ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು.
9) ವಿಭಾಗೀಯ ಸಹ ನಿರ್ದೇಶಕರು-1, ಬೆಂಗಳೂರು ವಿಭಾಗ, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು
10) ವಿಭಾಗೀಯ ಸಹ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಮೈಸೂರು ವಿಭಾಗ, ಮೈಸೂರು.
11) ಸಹ ನಿರ್ದೇಶಕರು, ಮಧ್ಯಾಹ್ನ ಉಪಹಾರ ಯೋಜನೆ, ಕೆ.ಜಿ.ರಸ್ತೆ, ಬೆಂಗಳೂರು.
12) ಸಂಬಂಧಿಸಿದ ಎಲ್ಲಾ ಜಿಲ್ಲಾ ಉಪ ನಿರ್ದೇಶಕರುಗಳಿಗೆ.
13) ಸಂಬಂದಿಸಿದ ಎಲ್ಲಾ ಪ್ರಾಂಶುಪಾಲರು ಹಾಗೂ ಪದನಿಮಿತ್ತ ಉಪ ನಿರ್ದೇಶಕರು[ಅಭಿವೃದ್ಧಿ] ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ, [ಡಯಟ್]
14) ವಿಶೇಷಾಧಿಕಾರಿಗಳು, ಕರ್ನಾಟಕ ರಾಜ್ಯ ಶಿಕ್ಷಕರ ಕಲ್ಯಾಣ ನಿಧಿ, ಕೆ.ಜಿ.ರಸ್ತೆ, ಬೆಂಗಳೂರು.
15) ಈ ಕಛೇರಿಯ ಎಲ್ಲಾ ಶಾಖಾಧಿಕಾರಿಗಳಿಗೆ.
16) ಸಂಬಂದಿಸಿದ ಎಲ್ಲಾ ತಾಲ್ಲೂಕು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ.
17) ಸಂಬಂಧಿಸಿದ ಅಧೀಕ್ಷಕರುಗಳಿಗೆ.
18) ಈ ಅಧಿಸೂಚನೆಯನ್ನು ಇಲಾಖಾ ವೆಬ್‌ಸೈಟ್-www.schooleducation.kar.in "ನಲ್ಲಿ ಪ್ರಕಟಿಸಲಾಗಿದೆ.
19) ಕಛೇರಿ ಪ್ರತಿ.